ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in

## ವಸತಿ ಉದ್ದೇಶಕ್ಕಾಗಿ
## ಕರಡು ಅನುಮೋದನಾ ಪತ್ರ
## (ವಿನ್ಯಾಸ ಅಭಿವೃದ್ಧಿಪಡಿಸಲು ಮಾತ್ರ)

ಸಂಖ್ಯೆ:ಆಯೋಪ್ರಾ:ಎಲ್‌ಎಓ:50:2006-07 ದಿನಾಂಕ: 23 JUN 2020

**ವಿಷಯ:**ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಬುಕ್ಕಸಾಗರ ಗ್ರಾಮದ ಸ.ನಂ.173ರಲ್ಲಿನ 02ಎಕರೆ 12ಗುಂಟೆ, 176/2ರಲ್ಲಿನ 04ಎಕರೆ 02ಗುಂಟೆ, 177ರಲ್ಲಿನ 10ಎಕರೆ 38ಗುಂಟೆ, 178/1ರಲ್ಲಿನ 0-20ಗುಂಟೆ, 178/2ರಲ್ಲಿನ 03ಎಕರೆ 08ಗುಂಟೆ ಒಟ್ಟು 21ಎಕರೆ ಭೌತಿಕವಾಗಿ ಸ್ಥಳದಲ್ಲಿ 20ಎಕರೆ 38ಗುಂಟೆ ವಿಸ್ತೀರ್ಣದ ಜಮೀನಿಗೆ **ಕರಡು ವಸತಿ ವಿನ್ಯಾಸ** ನಕ್ಷೆಗೆ ಅನುಮೋದನೆ ನೀಡುವ ಬಗ್ಗೆ.

**ಉಲ್ಲೇಖ:**
1. ಮೆ.ಎಕ್ಸ್‌ಪಟ್ ಇನ್‌ವೆಸ್ಟ್‌ಮೆಂಟ್ಸ್ ಪಾರ್ಟ್‌ನರ್ ಶ್ರೀ ಬಿ.ಆರ್.ರವೀಂದ್ರ ಇವರ ಮನವಿ ದಿನಾಂಕ:17.09.2019.
2. ದಿನಾಂಕ:19.10.2019ರಂದು ನಡೆದ ಪ್ರಾಧಿಕಾರದ 68ನೇ ಸಭೆಯ ವಿಷಯ ಸಂಖ್ಯೆ:18ರ ನಿರ್ಣಯ.
3. ಪ್ರಾಧಿಕಾರಕ್ಕೆ ಪಾವತಿಸಿದ ಹಣ ರೂ.20,000/-ಡಿ.ಡಿ.ಸಂಖ್ಯೆ:860334 ಮತ್ತು ಕೆರೆ ಸಂಕರಕ್ಷಣಾ ಶುಲ್ಕ ರೂ.24,591/-ಡಿ.ಡಿ.ಸಂಖ್ಯೆ:860333 ದಿನಾಂಕ:05.11.2019 (ರಶೀದಿ ಸಂಖ್ಯೆ:3702733,997982 ದಿನಾಂಕ:08.11.2019)
4. ಅತ್ತಿಬೆಲೆ, ಉಪನೊಂದಣಾಧಿಕಾರಿ ಬಸವನಗುಡಿ ರವರ ಪತ್ರ ಸಂಖ್ಯೆ:ABL-1-07616-2019-20 ನೊಂದಾಯಿತ ಪರಿತ್ಯಜನಾ ಪತ್ರದ ನೊಂದಣಿ ದಿನಾಂಕ:01.02.2020.
5. ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು, ಕಲ್ಲುಬಾಳು ಗ್ರಾಮಪಂಚಾಯ್ತಿ ರವರ ಪತ್ರ ದಿನಾಂಕ:04.02.2020 (Doc.no.7987/2019-20)
6. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಇವರ ನಿರಾಕ್ಷೇಪಣಾ ಪತ್ರ ಸಂಖ್ಯೆ: CTE-318443/PCB ID:83786 ದಿನಾಂಕ:18.06.2020.

*********

ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಬುಕ್ಕಸಾಗರ ಗ್ರಾಮದ ಸ.ನಂ.173ರಲ್ಲಿನ 02ಎಕರೆ 12ಗುಂಟೆ, 176/2ರಲ್ಲಿನ 04ಎಕರೆ 02ಗುಂಟೆ, 177ರಲ್ಲಿನ 10ಎಕರೆ 38ಗುಂಟೆ, 178/1ರಲ್ಲಿನ 0-20ಗುಂಟೆ, 178/2ರಲ್ಲಿನ 03ಎಕರೆ 08ಗುಂಟೆ ಒಟ್ಟು 21ಎಕರೆ ಭೌತಿಕವಾಗಿ ಸ್ಥಳದಲ್ಲಿ 20ಎಕರೆ 38ಗುಂಟೆ ಜಮೀನಿಗೆ ವಸತಿ ವಿನ್ಯಾಸವನ್ನು ಅನುಮೋದಿಸಲು ಕೋರಿರುತ್ತಾರೆ. ಉಲ್ಲೇಖ(2)ರಂತೆ, ನಡೆದ ಪ್ರಾಧಿಕಾರದ ಸಭೆಯಲ್ಲಿ ನಕ್ಷೆ ಅನುಮೋದಿಸಲು ತೀರ್ಮಾನಿಸಲಾಗಿದೆ. ಹಾಗೂ ಉಲ್ಲೇಖ(3)ರಂತೆ, ಶುಲ್ಕ ಪಾವತಿಸಿರುತ್ತಾರೆ. ಉಲ್ಲೇಖ(4)ರಂತೆ, ಸಾರ್ವಜನಿಕ ನಿವೇಶನವನ್ನು ಪ್ರಾಧಿಕಾರಕ್ಕೆ ನೊಂದಾಯಿತ ಪರಿತ್ಯಜನಾ ಪತ್ರದ ಮುಖಾಂತರ ಹಾಗೂ ಉಲ್ಲೇಖ(5)ರಂತೆ, ಉದ್ಯಾನವನ ಹಾಗೂ ರಸ್ತೆಗಾಗಿ ಕಾಯ್ದಿರಿಸಿದ ಪ್ರದೇಶವನ್ನು ಕಲ್ಲುಬಾಳು ಗ್ರಾಮಪಂಚಾಯ್ತಿ ಕಾರ್ಯಾಲಯಕ್ಕೆ ಹಸ್ತಾಂತರಿಸಿರುತ್ತಾರೆ. ಆದ್ದರಿಂದ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ17(2) ದಿನಾಂಕ:10.09.2015ರ ತಿದ್ದುಪಡಿಯಂತೆ, ವಸತಿ ಬಡಾವಣೆಯನ್ನು ಅಭಿವೃದ್ಧಿಪಡಿಸಲು ಮಾತ್ರ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ತಾತ್ಕಾಲಿಕ ಅನುಮೋದನೆ ನೀಡಲಾಗಿದೆ.

ಕರಡು ವಸತಿ ಬಡಾವಣೆಯಲ್ಲಿ ಬರುವ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿ ನಂತರ ಸಂಬಂಧಿಸಿದ ಇಲಾಖೆಗಳಿಂದ ನಿರಾಕ್ಷೇಪಣಾ ಪತ್ರಗಳನ್ನು ಪಡೆದು ಈ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿದಲ್ಲಿ ವಸತಿ ವಿನ್ಯಾಸ ನಕ್ಷೆಗೆ ವಲಯನಿಯಮಾವಳಿಯಂತೆ, ಅನುಮೋದನೆ ನೀಡಿ ನಿವೇಶನಗಳನ್ನು ನೊಂದಣಿಗಾಗಿ ಬಿಡುಗಡೆ ಮಾಡಲಾಗುವುದು.

ಕ್ರ.ಸಂ.

## ಷರತ್ತುಗಳು

1. ಈ ಹಿಂದೆ ಪ್ರಾಧಿಕಾರದಿಂದ ಪತ್ರ ಸಂಖ್ಯೆ:ಆಯೋಪ್ರಾ:ಎಲ್‌ಎಓ:50:2006–07 ದಿನಾಂಕ: 25.09.2013ರಂದು ಅನುಮೋದಿಸಲಾದ ಪ್ರಾರಂಭಿಕ ಪ್ರಮಾಣ ಪತ್ರ ಮತ್ತು ವಸತಿ ಸಮುಚ್ಚಯ ನಕ್ಷೆಯನ್ನು ಮತ್ತು ಆಯೋಪ್ರಾ:ಸಿಸಿ:148:2014–15 ದಿನಾಂಕ:14.03.2016ರಂದು ಅನುಮೋದಿಸಲಾದ ಬಹುಮಹಡಿ ಕಟ್ಟಡ ಸಮುಚ್ಚಯದ ಪ್ರಾರಂಭಿಕ ಪ್ರಮಾಣ ಪತ್ರ ಮತ್ತು ನಕ್ಷೆಯನ್ನು ರದ್ದುಪಡಿಸಲಾಗಿದೆ.
2. ಅನುಮೋದನೆ ನೀಡಿದ ದಿನಾಂಕದಿಂದ ಎರಡು ವರ್ಷದೊಳಗೆ ವಿನ್ಯಾಸವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸತಕ್ಕದ್ದು. ತಪ್ಪಿದ್ದಲ್ಲಿ ತಾತ್ಕಾಲಿಕ ಅನುಮೋದನೆಯನ್ನು ನವೀಕರಿಸಿಕೊಳ್ಳತಕ್ಕದ್ದು.
3. ಅಂತಿಮ ಹಂತದ ಅಂದರೆ ಶೇಕಡ 100ರಷ್ಟು ನಿವೇಶನಗಳನ್ನು ಬಿಡುಗಡೆಗೊಳಿಸುವ ಪೂರ್ವದಲ್ಲಿ ವಿನ್ಯಾಸದಲ್ಲಿ ಎಲ್ಲಾ ಸಿವಿಲ್ ಕಾಮಗಾರಿಗಳಾದ ರಸ್ತೆ, ಚರಂಡಿ, ಒಳಚರಂಡಿ, ನೀರಿನ ಸಂಪರ್ಕ ವಿದ್ಯುತ್ ಸರಬರಾಜು, STP ಉದ್ಯಾನವನ ಮತ್ತು ಆಟದ ಮೈದಾನ ಹಾಗೂ ಇತರೆ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಅಗತ್ಯಕ್ಕನುಗುಣವಾಗಿ ಸಕ್ಷಮ ಪ್ರಾಧಿಕಾರಗಳಿಂದ ದೃಢೀಕರಣ ಪತ್ರ ಪಡೆದು ಸಲ್ಲಿಸತಕ್ಕದ್ದು.
4. ವಸತಿ ವಿನ್ಯಾಸದಲ್ಲಿ ಕಾಯ್ದಿರಿಸಿರುವ ಉದ್ಯಾನವನ ಪ್ರದೇಶಕ್ಕೆ Fencing ಅಳವಡಿಸಿ ಉದ್ಯಾನವನವನ್ನು ಅಭಿವೃದ್ಧಿಪಡಿಸಿ ತೋಟಗಾರಿಕೆ ಇಲಾಖೆಯಿಂದ ದೃಢೀಕರಣ ಪತ್ರ ಪಡೆದು ಸಲ್ಲಿಸತಕ್ಕದ್ದು.
5. ಪ್ರಸ್ತಾವಿತ ವಿನ್ಯಾಸದಲ್ಲಿ ಸೂಕ್ತವಾದ ಕಡೆ ಪ್ರಮಾಣೀಕೃತ ರೀತಿಯ ಒಳಚರಂಡಿ ವ್ಯವಸ್ಥೆ ಹಾಗೂ ಶುದ್ಧೀಕರಣ ಘಟಕ (STP)ವನ್ನು ವಿನ್ಯಾಸದಲ್ಲಿ ನಿರ್ಮಾಣ ಮಾಡತಕ್ಕದ್ದು.
6. ಈ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು.
7. ಈ ಪ್ರದೇಶದಲ್ಲಿ ಹಾಲಿ ಇರುವ ಗಿಡಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಎರಡೂ ಕಡೆ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸಿಗಳನ್ನು ಬೆಳೆಸುವುದು.
8. ಕರಡು ಅನುಮೋದಿತ ವಿನ್ಯಾಸದ ಸೂಕ್ತ ಸ್ಥಳಗಳಲ್ಲಿ Storm Water Pits (SEP) ಮತ್ತು (RP) ಗಳನ್ನು ನಿರ್ಮಿಸಿ ವಿನ್ಯಾಸದಲ್ಲಿ ಮಳೆ ನೀರು ಸಂಗಹಣೆ (Rain water Harvesting pit) ಪದ್ಧತಿಯನ್ನು ಕಡ್ಡಾಯವಾಗಿ ಅಳವಡಿಸಿ ಅಂತರ್ ಜಲವೃದ್ಧಿಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
9. ಕರಡು ಅನುಮೋದಿತ ವಿನ್ಯಾಸದಲ್ಲಿರುವ ರಸ್ತೆಗಳು, ಉದ್ಯಾನವನವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಈ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು ಹಾಗೂ ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ನಿವೇಶನವನ್ನು ಒತ್ತುವರಿಯಾಗದಂತೆ ಸಂರಕ್ಷಿಸತಕ್ಕದ್ದು.
10. ವಿನ್ಯಾಸವನ್ನು ಅಭಿವೃದ್ಧಿಪಡಿಸಿದ ನಂತರ ಬಡಾವಣೆಯಲ್ಲಿನ ಉದ್ಯಾನವನ, ರಸ್ತೆ ಜಾಗಗಳನ್ನು ಸ್ಥಳೀಯ ಸಂಸ್ಥೆಗೆ (ಪಂಚಾಯ್ತಿ /ಪುರ ಸಭೆ/ನಗರ ಸಭೆ) ಮತ್ತು ನಾಗರೀಕ ಸೌಲಭ್ಯ ಜಾಗಗಳನ್ನು ಪ್ರಾಧಿಕಾರಕ್ಕೆ ಹಸ್ತಾಂತರಿಸುವ ಷರತ್ತಿಗೊಳಪಟ್ಟಿರುತ್ತದೆ.
11. ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಇಲಾಖೆಗಳು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಮಂಜೂರಾತಿಯೂ ಕೂಡಲೇ ರದ್ದಾಗುವುದು.
12. ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.

ದೂರವಾಣಿ : 080-27835122
ಫ್ಯಾಕ್ಸ್ : 080-27836569

# ಆನೇಕಲ್ ಯೋಜನಾ ಪ್ರಾಧಿಕಾರ

"ಅಣ್ಣ" ನಂ. 430, ಹೆನ್ನಾಗರ ಗೇಟ್, ಹೊಸೂರು ಮುಖ್ಯರಸ್ತೆ, ಬೆಂಗಳೂರು-560 099.

www.anekal.tpa.gov.in, www.e-vinyasa.kar.nic.in

13. ಈ ಅನುಮೋದನೆಯು ತಾಂತ್ರಿಕವಾಗಿರುವುದರಿಂದ ಇದನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸಲು ಉಪಯೋಗಿಸಲು ಬರುವುದಿಲ್ಲ.
14. ಕರಡು ವಸತಿ ಬಡಾವಣೆಯಲ್ಲಿ ವಿಕಲಚೇತನರಿಗೆ ಸುಲಭವಾಗಿ ಸಂಚರಿಸಲು ಅನುಕೂಲವಾಗುವಂತೆ ಪಾದಚಾರಿ ಮಾರ್ಗವನ್ನು ಹಾಗೂ ರಸ್ತೆಗಳನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು.
15. ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ ಮುಂತಾದವುಗಳಿಗೆ ವಿನ್ಯಾಸದ ಯಾವುದೇ ಮಲೀನ ನೀರನ್ನು ಬಿಡಬಾರದು.
16. ಈ ಅನುಮೋದಿತ ಕರಡು ವಸತಿ ವಿನ್ಯಾಸ ನಕ್ಷೆ ಪ್ರದೇಶದಲ್ಲಿ ಬರುವ 'ಬಿ' ಖರಾಬು ಜಮೀನುಗಳು ಸರ್ಕಾರಕ್ಕೆ ಸೇರಿರುತ್ತದೆ. ಈ ಜಮೀನುಗಳನ್ನು ಯಥಾಸ್ಥಿತಿಯಂತೆ ಕಾಪಾಡತಕ್ಕದ್ದು. ಹಾಗೂ ಅತಿಕ್ರಮಣ ಮಾಡಬಾರದು ಮತ್ತು ಇತರೆ ಉದ್ದೇಶಗಳಿಗಾಗಿ ಉಪಯೋಗಿಸತಕ್ಕದ್ದಲ್ಲ.
17. **ಸದರಿ ಕರಡು ವಿನ್ಯಾಸದ ಸುತ್ತಲೂ ಕಾಂಪೌಂಡ್ ನಿರ್ಮಿಸಿ ಗೇಟ್‌ಅನ್ನು ಅಳವಡಿಸಿ ಗೇಟೆಡ್ ಕಮ್ಯೂನಿಟಿ ಎಂಬ ಹೆಸರಿನಲ್ಲಿ ನಿವೇಶನಗಳನ್ನು ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಹಾಗೂ ಸದರಿ ವಿನ್ಯಾಸದಲ್ಲಿನ ರಸ್ತೆ, ಪಾದಚಾರಿ ಮಾರ್ಗ ಹಾಗೂ ಉದ್ಯಾನವನಗಳು ಸಾರ್ವಜನಿಕ ಸ್ವತ್ತಾಗಿರುತ್ತದೆ. ಆದ್ದರಿಂದ ಸಾರ್ವಜನಿಕ ಸ್ವತ್ತುಗಳನ್ನು ಸಾರ್ವಜನಿಕರಿಗೆ ಮುಕ್ತವಾಗಿಡತಕ್ಕದ್ದು.**
18. ಕರಡು ಅನುಮೋದಿತ ವಿನ್ಯಾಸದಲ್ಲಿ ಬರುವ 18.00ಮೀಟರ್‌ಗಿಂತ ಹೆಚ್ಚಿನ ಅಗಲದ ರಸ್ತೆಗಳ ಅಕ್ಕ-ಪಕ್ಕದಲ್ಲಿ ಪಾದಚಾರಿ ಮತ್ತು ಸೈಕಲ್ ಟ್ರಾಕ್‌ನ್ನು ಅಳವಡಿಸಿಕೊಳ್ಳತಕ್ಕದ್ದು.
19. ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಅನುಮೋದನೆಯು ಯಾವ ಪೂರ್ವ ಸೂಚನೆಯು ಇಲ್ಲದೇ ತಂತಾನೆ ರದ್ದುಗೊಳ್ಳುತ್ತದೆ.
20. ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ವಿಧಿ 17(4)ರಂತೆ ಕ್ರಮ ಜರುಗಿಸಲಾಗುವುದು.
21. ಪ್ರಸ್ತಾವಿತ ವಿನ್ಯಾಸದಲ್ಲಿ ಸೂಕ್ತವಾದ ಕಡೆ ಪ್ರಮಾಣೀಕೃತ ರೀತಿಯಲ್ಲಿ ಸೀವರ್ಏಜ್ ಟ್ರೀಟ್‌ಮೆಂಟ್ ಪ್ಲಾಂಟ್ ಅನ್ನು ಸ್ಥಾಪಿಸಬೇಕು ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪತ್ರ ಸಂಖ್ಯೆ:CTE-318443/PCB ID:83786 ದಿನಾಂಕ:18.06.2020ರ ಷರತ್ತುಗಳನ್ನು ತಪ್ಪದೇ ಅನುಸರಿಸತಕ್ಕದ್ದು.
22. ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿ ಅಂಚಿನಲ್ಲಿ ಬಡಾವಣೆಗಳ ಉದ್ದಕ್ಕೂ ಡಾಂಬರು ರಸ್ತೆಯ ಮೇಲ್ಮೈನಿಂದ 2½ ಅಡಿ ಆಳಕ್ಕೆ ಚರಂಡಿಯ ಮೇಲ್ಮೈ ರಸ್ತೆಯ ಮಟ್ಟದಿಂದ ¾ ಅಡಿ ಕೆಳಕ್ಕೆ ರಸ್ತೆ ಮತ್ತು ಬಡಾವಣೆಯ ನೀರು ಚರಂಡಿಗೆ ಹೋಗುವಂತೆ ಕಾಂಕ್ರೀಟ್ ಚರಂಡಿ ನಿರ್ಮಿಸುವಂತೆ ಮತ್ತು ಬಡಾವಣೆಯ ಮುಖ್ಯದ್ವಾರಗಳಲ್ಲಿ ಸಹ ನೀರು ರಸ್ತೆಗೆ ಹರಿದು ಬರದಂತೆ ಚರಂಡಿ ನಿರ್ಮಿಸಿ ಅದರ ಮೇಲೆ ಸೂಕ್ತ ವ್ಯವಸ್ಥೆ (COW CATCHERS)ಗಳನ್ನು ಅಳವಡಿಸುವಂತೆ, ಮತ್ತು ಬಡಾವಣೆಯ ದ್ವಾರದಿಂದ ರಸ್ತೆಯ ಅಂಚಿನವರೆಗೆ ರಸ್ತೆಯನ್ನು ಎತ್ತರಿಸದಂತೆ ಸೂಚಿಸಲಾಗಿದೆ.
23. ಸದರಿ ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.
24. ಕರಡು ಅನುಮೋದಿತ ವಿನ್ಯಾಸ ನಕ್ಷೆಯನ್ನು ಸಾರ್ವಜನಿಕರ ವೀಕ್ಷಣೆಗಾಗಿ ಸ್ಥಳದಲ್ಲಿ ನಾಮಫಲಕದಲ್ಲಿ ಕಡ್ಡಾಯವಾಗಿ ಅಳವಡಿಸತಕ್ಕದ್ದು.

**25.** ನಿಯಮಾವಳಿಯಂತೆ, ರೇರಾ ದಿಂದ ಅನುಮೋದನೆ ಪಡೆಯತಕ್ಕದ್ದು.

**26.** ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 3 ಟಿಟಿಪಿ 2015 ದಿನಾಂಕ:25.02.2020ರನ್ವಯ ಶುಲ್ಕವನ್ನು ಪಾವತಿಸುವ ಬಗ್ಗೆ ಸರ್ಕಾರದಿಂದ ನಿರ್ದೇಶನ ಬಂದಲ್ಲಿ ಅದರಂತೆ ಬದ್ಧರಾಗಿರತಕ್ಕದ್ದು.

23/6/2020

ಸದಸ್ಯ-ಕಾರ್ಯದರ್ಶಿ ಹಾಗೂ ನಗರ ಮತ್ತು
ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು,
ಆನೇಕಲ್ ಯೋಜನಾ ಪ್ರಾಧಿಕಾರ,
ಆನೇಕಲ್.

<u>ಪ್ರತಿಯನ್ನು:</u>

1. ಮೆ.ಎಕ್ಸ್‌ಪಟ್ ಇನ್‌ವೆಸ್ಟ್‌ಮೆಂಟ್ಸ್ ಪಾರ್ಟ್‌ನರ್ ಶ್ರೀ ಬಿ.ಆರ್.ರವೀಂದ್ರ, ನಂ.901, 9ನೇ ಫ್ಲೋರ್, ಪ್ರೈಡ್ ಹುಲ್‌ಕುಲ್,116, ಲಾಲ್‌ಬಾಗ್ ರೋಡ್, ಬೆಂಗಳೂರು-560 027 ಇವರಿಗೆ ಮಾಹಿತಿಗಾಗಿ ಕರಡು ವಿನ್ಯಾಸದ ನಕ್ಷೆಯೊಂದಿಗೆ ಕಳುಹಿಸಲಾಗಿದೆ.
2. ಮಾನ್ಯ ಕಾರ್ಯದರ್ಶಿಗಳು,ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ಕಾರ್ಪೋರೇಟ್ ಆಫೀಸ್, 1/14, 2ನೇ ಫ್ಲೋರ್, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಸಿಎಸ್ಐ ಕಾಂಪೌಂಡ್ 3ನೇ ಕ್ರಾಸ್, ಮಿಷನ್ ರೋಡ್ ಯುನಿಟಿ ಬಿಲ್ಡಿಂಗ್, ಸಂಪಂಗಿ ರಾಮನಗರ, ಬೆಂಗಳೂರು-560 027 ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳು, ಕಲ್ಲುಬಾಳು ಗ್ರಾಮಪಂಚಾಯ್ತಿ,ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು ಇವರಿಗೆ ಕರಡು ವಿನ್ಯಾಸದ ಪ್ರತಿಯೊಂದಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲಾಗಿದೆ.